## ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ : 424

ಸದಸ್ಯರ ಹೆಸರು : ಶ್ರೀ ಶಾಂತರಾಮ್ ಬುಡ್ನ ಸಿದ್ದಿ
(ನಾಮನಿರ್ದೇಶನ ಹೊಂದಿದವರು)

ಉತ್ತರಿಸುವ ದಿನಾಂಕ : 10-07-2023

ಉತ್ತರಿಸುವವರು : ಮಾನ್ಯ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವರು

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಉತ್ತರ ಕನ್ನಡ ಜಿಲ್ಲೆಯಲ್ಲಿ ಅರಣ್ಯ ಇಲಾಖೆಯಿಂದ ಪ್ರಸ್ತುತ ಸಾಲಿನಲ್ಲಿ ಗಿಡ ನೆಡುವ ಯೋಜನೆ ಕೈಗೊಳ್ಳಲಾಗಿದೆಯೇ; ಹಾಗಿದ್ದಲ್ಲಿ, ಎಷ್ಟು ಗಿಡಗಳನ್ನು ನೆಡಲಾಗಿದೆ ಉತ್ತಮ ಸ್ಥಿತಿಯಲ್ಲಿರುವ ಗಿಡಗಳು ಎಷ್ಟು ಮತ್ತು ನಶಿಸಿಹೋದ ಗಿಡಗಳ ಪ್ರಮಾಣ ಎಷ್ಟು; | ಉತ್ತರ ಕನ್ನಡ ಜಿಲ್ಲೆಯಲ್ಲಿ ಪ್ರಸ್ತುತ ಸಾಲಿನಲ್ಲಿ ಒಟ್ಟು 122 ಲಕ್ಷ ಗಿಡಗಳನ್ನು ನೆಡುವ ಗುರಿಯೊಂದಿಗೆ ಗಿಡ ನೆಡುವ ಯೋಜನೆಯನ್ನು ಹಮ್ಮಿಕೊಳ್ಳಲಾಗಿದೆ.<br><br>ದಿನಾಂಕ: 02-07-2023 ರವರೆಗೆ ಒಟ್ಟು 17.626 ಲಕ್ಷ ಗಿಡಗಳನ್ನು ನೆಡಲಾಗಿದೆ. ಈ ಯೋಜನೆಯಡಿ ನೆಟ್ಟಿರುವ ಎಲ್ಲಾ ಗಿಡಗಳು ಉತ್ತಮ ಸ್ಥಿತಿಯಲ್ಲಿದ್ದು, ಯಾವುದೇ ಗಿಡಗಳು ನಶಿಸಿರುವುದಿಲ್ಲ. |
| ಆ) | ಈ ಗಿಡನೆಡುವ ವೃಕ್ಷಾರೋಪನ ಕಾರ್ಯಕ್ರಮದಲ್ಲಿ ಉತ್ತರ ಕನ್ನಡ ಜಿಲ್ಲೆಯ ಬುಡಕಟ್ಟು ಜನಾಂಗಗಳ ಪಾತ್ರವೇನು? | ಪ್ರಸ್ತುತ ಚಾಲ್ತಿಯಲ್ಲಿರುವ ಸರ್ಕಾರದ ಮಾರ್ಗಸೂಚಿಗಳನ್ವಯ ಗ್ರಾಮ ಪಂಚಾಯತಿ, ತಾಲೂಕು ಪಂಚಾಯತಿ ಮತ್ತು ನಗರಸಭೆ ವ್ಯಾಪ್ತಿಗಳಲ್ಲಿ ಎಲ್ಲಾ ವರ್ಗದ ಜನರೊಂದಿಗೆ, ಸಂಘ ಸಂಸ್ಥೆಗಳು ಹಾಗೂ ಇತರೆ ಇಲಾಖೆಗಳ ಸಹಭಾಗಿತ್ವದೊಂದಿಗೆ ದಿನಾಂಕ: 01-07-2023 ರಿಂದ 07-07-2023 ರವರೆಗೆ ಬೃಹತ್ ಪ್ರಮಾಣದಲ್ಲಿ ವೃಕ್ಷಾರೋಪಣ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗುತ್ತಿದೆ.<br><br>ಉತ್ತರ ಕನ್ನಡ ಜಿಲ್ಲಾ ವ್ಯಾಪ್ತಿಯ ಸಿದ್ದಿ ಬುಡಕಟ್ಟು ಜನಾಂಗದವರೊಂದಿಗೆ ದಿನಾಂಕ: 05-07-2023 ರಂದು ಯಲ್ಲಾಪುರ ವಿಭಾಗದ ಕೆಲಸೆ ಮತ್ತು ಕೆರೆಹೊಸಳ್ಳಿ ಗ್ರಾಮಗಳಲ್ಲಿ ವನಮಹೋತ್ಸವ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ. ಈ ಕಾರ್ಯಕ್ರಮದಲ್ಲಿ ಬುಡಕಟ್ಟು ಜನಾಂಗದ ನಾಗರೀಕರಿಗೆ ವನಮಹೋತ್ಸವದ ಬಗ್ಗೆ ಅರಿವು ಮೂಡಿಸುವುದು, ಗಿಡ ನೆಡುವುದು ಮತ್ತು ಸಂರಕ್ಷಿಸಲು ಅರಿವು ಮೂಡಿಸಲಾಗುವುದು. |

ಸಂಖ್ಯೆ: ಅಪಜೀ 76 ಎಫ್‌ಎಪಿ 2023

(ಈಶ್ವರ ಬಿ. ಖಂಡ್ರೆ)
ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವರು